ನೀವು ಮಾತನಾಡಿ. ಅವರು ಏನು ಹೇಳುತ್ತಾರೆ, ಸರ್ಕಾರ ಏನು ಹೇಳುತ್ತದೆ ಕೇಳಿ. ಆದ್ದರಿಂದ ದಯಮಾಡಿ ನೀವುಗಳು ನಿಮ್ಮ ಸ್ಥಾನಗಳಿಗೆ ಹೋಗಿ.

(ಗೊಂದಲ)

ಅಧ್ಯಕ್ಷರು : ಈಗ ಸಭೆಯನ್ನು ಅರ್ಧ ಗಂಟೆಗಳ ಕಾಲ ಮುಂದೂಡಲಾಗಿದೆ.

(ಸದನವು 12–42ಕ್ಕೆ ಮುಂದುಡಲ್ಪಟ್ಟು ಅರ್ಧ ಗಂಟೆಗಳ ನಂತರ ಸಮಾವೇಶಗೊಳ್ಳಲು ನಿರ್ಧರಿಸಿತು.)

(ಸದನವು ಪುನಃ 2 ಗಂಟೆ 45 ನಿಮಿಷಕ್ಕೆ ಸಮಾವೇಶಗೊಂಡಿತು)

(ಮಾನ್ಯ ಸಭಾಧ್ಯಕ್ಷರು ಶ್ರೀ ಕೃಷ್ಣರವರು ಅಧ್ಯಕ್ಷ ಪೀಠವನ್ನು ಅಲಂಕರಿಸಿದ್ದರು)

(ಕಾಂಗ್ರೆಸ್ ಸದಸ್ಯರು ಹಾಗೂ ಸದಸ್ಯರಾದ ಶ್ರೀ ಮಂಚನಹಳ್ಳಿ ಮಹದೇವ ಹಾಗೂ ನಾಮನಿರ್ದೇಶಿತ ಸದಸ್ಯರಾದ ಶ್ರೀ ಐವಾನ್ ನಿಗ್ಲಿಯವರು ಬಾವಿಯಲ್ಲಿ ಧರಣಿ ಹೂಡಿದ್ದರು)

ಅಧ್ಯಕ್ಷರ ಅಪ್ಪಣೆಯ ಮೇರೆಗೆ

(2) ವಿಷಯ : ವಿರೋಧ ಪಕ್ಷದ ಶಾಸಕರ ಕ್ಷೇತ್ರಗಳಲ್ಲಿ ಅಭಿವೃದ್ಧಿ ಕೆಲಸಗಳು ಕುಂಠಿತಗೊಂಡಿರುವ ಬಗ್ಗೆ.

ಅಧ್ಯಕ್ಷರು : ಮಾನ್ಯ ಸದಸ್ಯರುಗಳು ದಯಮಾಡಿ ತಮ್ಮ ತಮ್ಮ ಸ್ಥಾನಗಳಿಗೆ ಹೋಗಬೇಕು. ಈಗ ಮಾನ್ಯ ಮುಖ್ಯಮಂತ್ರಿಗಳು ಮಾತನಾಡುತ್ತಾರೆ.

(ಅಡಚಣೆ)

ಶ್ರೀ ಚೆಲುವರಾಯಸ್ವಾಮಿ (ಸಾರಿಗೆ ಸಚಿವರು) : ಮಾನ್ಯ ಅಧ್ಯಕ್ಷರೇ, ಆ ಬಗ್ಗೆ ಈಗಾಗಲೇ ಮಾತನಾಡಿ ಆಗಿದೆ. ಅದರಂತೆ ಮಾಡುತ್ತಾರೆ. ಸ್ಪೀಕರ್ ಅವರ ಮುಂದೆಯೇ ಮಾತನಾಡಲಾಗಿದೆ. ಮತ್ತೆ ಏಕೆ ಅದರ ಬಗ್ಗೆ ಪ್ರಸ್ತಾಪ ಮಾಡುತ್ತೀರಾ.

ಅಧ್ಯಕ್ಷರು : ಮಾನ್ಯ ಶಿವಕುಮಾರ್‌ರವರೆ, ತಾವು ಅಡ್ಡ ಮಾತನಾಡಬೇಡಿ. ಈಗ ತಾವುಗಳೆಲ್ಲರೂ ತಮ್ಮ ತಮ್ಮ ಸ್ಥಾನಕ್ಕೆ ಹೋಗಿ. ಈಗ ಇದರ ಬಗ್ಗೆ ನಮ್ಮ ಟೀ ಛೇಂಬರಿನಲ್ಲಿ ಮಾತನಾಡಿದ್ದೀರಿ. ಮಾನ್ಯ ಮುಖ್ಯಮಂತ್ರಿಗಳು ನಿಮ್ಮ ಸಮಸ್ಯೆಗಳಿಗೆ ಉತ್ತರವನ್ನು ಕೊಡುತ್ತಾರೆ. ದಯಮಾಡಿ ತಾವುಗಳೆಲ್ಲರೂ ನಿಮ್ಮಗಳ ಸ್ಥಾನಗಳಿಗೆ ಹೋಗಿ ಉತ್ತರವನ್ನು ಕೇಳಿ.

ಅಧ್ಯಕ್ಷರು : ಈಗ ಮಾನ್ಯ ಮುಖ್ಯಮಂತ್ರಿಗಳಲ್ಲಿ ಮಾನ್ಯ 225 ಸದಸ್ಯರುಗಳ ಪರವಾಗಿ ನಾನು ವಿನಂತಿ ಮಾಡಿಕೊಂಡಿದ್ದೇನೆ. ಅದರಲ್ಲಿ ನೀವು ಇದ್ದೀರಿ. ಆದ್ದರಿಂದ ದಯಮಾಡಿ ನಿಮ್ಮ ನಿಮ್ಮ ಸ್ಥಾನಗಳಿಗೆ ಹೋಗಿ. ಅವರು ನಿಮ್ಮ ಸಮಸ್ಯೆಗಳ ಬಗ್ಗೆ ಉತ್ತರವನ್ನು ಕೊಡುತ್ತಾರೆ.

ಅಧ್ಯಕ್ಷರು : ಮಾನ್ಯ ಮುಖ್ಯಮಂತ್ರಿಗಳು ಮಾತನಾಡುತ್ತಾರೆ. ತಾವುಗಳೆಲ್ಲರೂ ತಮ್ಮ ತಮ್ಮ ಸ್ಥಾನಗಳಿಗೆ ಹೋಗಿ.

ಡಾ : ಕೆ. ಅನ್ನದಾನಿ : ಮಾನ್ಯ ಅಧ್ಯಕ್ಷರೆ ಕಳೆದ 7 ವರ್ಷದಿಂದ ಕಾಂಗ್ರೆಸ್‌ನವರು ಅಧಿಕಾರದಲ್ಲಿದ್ದರು. ಹಿಂದೆ ಎಲ್ಲಾ ಅವರ ಕಾಲದಲ್ಲಿ ಯಾವ ಯಾವ ಕ್ಷೇತ್ರಕ್ಕೆ ಎಷ್ಟೆಷ್ಟು ಕೆಲಸ ಮಾಡಿದ್ದಾರೆ ಎಂಬುದನ್ನು ಕೇಳಿ. ಅವರ ಕಡೆಯಿಂದ ಅದರ ಬಗ್ಗೆ ಅಂಕಿ ಅಂಶಗಳನ್ನು ತೆಗೆದುಕೊಳ್ಳಿ ಆಮೇಲೆ ಅವರು ಮಾತನಾಡಲಿ. ಅವರು ಬಹಳ ಸಜ್ಜನರ ರೀತಿ ಪ್ರಶ್ನೆ ಮಾಡುತ್ತಿದ್ದಾರೆ. ಹಿಂದೆ ಕಾಂಗ್ರೆಸ್ ಪಕ್ಷದ ಸರ್ಕಾರ ಅಧಿಕಾರದಲ್ಲಿದ್ದಾಗ ಆ ಸಂದರ್ಭದಲ್ಲಿ ಅವರ ಕ್ಷೇತ್ರಕ್ಕೆ ಹಾಗೂ ವಿರೋಧಪಕ್ಷದಲ್ಲಿ ಸದಸ್ಯರ ಕ್ಷೇತ್ರಕ್ಕೆ ಎಷ್ಟು ಕೆಲಸ ಆಗಿದೆ ಎಂಬ ಬಗ್ಗೆ ದಯಮಾಡಿ ಅಂಕಿ ಅಂಶಗಳನ್ನು ತೆಗೆದುಕೊಳ್ಳಿ ಅವರಿಗೆ ಪ್ರಶ್ನೆ ಮಾಡಲು ಏನು ಅಧಿಕಾರ ಇದೆ.?

(ಗೊಂದಲ)

ಅಧ್ಯಕ್ಷರು : ನಾನು ಮಾನ್ಯ ಮುಖ್ಯಮಂತ್ರಿಗಳನ್ನು ಕರೆದಿದ್ದೇನೆ. ದಯಮಾಡಿ ನೀವು ಗಳೆಲ್ಲರೂ ಕುಳಿತುಕೊಳ್ಳಿ. ಎಷ್ಟು ಹೇಳಿದರೂ ಅಷ್ಟೇ. ನಾಯಿಬಾಲ ಡೊಂಕು ದಯಮಾಡಿ ಎಲ್ಲರೂ ಕುಳಿತುಕೊಳ್ಳಿ, ಮಾನ್ಯ ಮುಖ್ಯಮಂತ್ರಿಗಳು ಮಾತನಾಡುತ್ತಾರೆ.

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ ಏನು ವಿರೋಧಪಕ್ಷದ ಕೆಲವು ಸದಸ್ಯರುಗಳು ಅವರ ಒಂದು ಕ್ಷೇತ್ರಗಳ ಅಭಿವೃದ್ಧಿಗಳ ಬಗ್ಗೆ ಕೆಲವು ತಾರತಮ್ಯಗಳು ಆಗಿದ್ದಾವೆಂದು ಸದನದ ಗಮನಕ್ಕೆ ತಂದಿದ್ದಾರೆ. ಈಗಾಗಲೇ ಇದರ ಬಗ್ಗೆ ತಮ್ಮ ಕೊಠಡಿಯಲ್ಲಿ ಚರ್ಚೆ ಮಾಡಿದ್ದೇವೆ. 13 ಮತ್ತು 14ನೇ ತಾರೀಖಿನಂದು ನಾನು ಜಿಲ್ಲಾವಾರು ಹಾಗೂ ಅಧಿಕಾರಿಗಳ ಸಭೆಯನ್ನು ಕರೆದು ಎಲ್ಲೆಲ್ಲಿ ಲೋಪದೋಷಗಳು ಇದ್ದಾವೆ, ಅವುಗಳನ್ನು ಸರಿಪಡಿಸುವುದಕ್ಕೆ ತೀರ್ಮಾನವನ್ನು ಮಾಡುತ್ತೇನೆ. ವಿರೋಧಪಕ್ಷದವರನ್ನು ಹಾಗೂ ಬೇರೆಯ ವರನ್ನು ಕರೆಯಬೇಕಾಗುತ್ತದೆ. ಎಲ್ಲರನ್ನೂ ಕರೆದು ನನ್ನ ಗಮನಕ್ಕೆ ಬಂದಿರುವಂತಹ ಸಮಸ್ಯೆಗಳನ್ನು ಬಗೆಹರಿಸುವುದಕ್ಕೆ ಪ್ರಯತ್ನಪಡುತ್ತೇನೆ.

ಅಧ್ಯಕ್ಷರು : ದಯಮಾಡಿ ತಾವುಗಳು ತಮ್ಮಗಳ ಸ್ಥಾನಕ್ಕೆ ಹೋಗಿ.

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಗಳು) : 13 ಮತ್ತು 14ನೇ ತಾರೀಖು ಸಭೆಯನ್ನು ಕರೆಯುತ್ತೇನೆಂದು ಚರ್ಚೆಯಲ್ಲಿ ಹೇಳಿದ್ದೇನೆ. ಆ ದಿನಾಂಕದಂದು ಸಭೆಯನ್ನು ಕರೆದು ಅಧಿಕಾರಿಗಳೊಂದಿಗೆ ಕುಳಿತು ಚರ್ಚೆ ಮಾಡಿ, ಸದಸ್ಯರುಗಳು ನನ್ನ ಗಮನಕ್ಕೆ ತಂದಿರತಕ್ಕಂತಹ ಸಮಸ್ಯೆಗಳನ್ನು ಜೊತೆಗೆ ಸರ್ಕಾರದ ಆರ್ಥಿಕ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ನಾನು ಏನು ಕೆಲಸಗಳನ್ನು ಮಾಡಬೇಕಾಗುತ್ತದೆ, ಸದಸ್ಯರು ಕೊಟ್ಟಿರತಕ್ಕಂತಹ ಮೆನವಿಗಳನ್ನು ಬೇಡಿಕೆಗಳ ಮೇಲೆ ನಾನು ಜರೂರಾಗಿ ಕ್ರಮ ತೆಗೆದುಕೊಳ್ಳುತ್ತೇನೆ.

ಅಧ್ಯಕ್ಷರು : ನಿಮ್ಮ ನಿಮ್ಮ ಸ್ಥಾನಗಳಿಗೆ ಹೋಗಿ ಅಧಿಕಾರಿಗಳು ಇರುತ್ತಾರೆ, ಆಗ ಮಾತನಾಡಿ.

(ಈ ಹಂತದಲ್ಲಿ ಸದನದ ಬಾವಿಯಲ್ಲಿ ಧರಣಿ ಹೂಡಿದ್ದ ಮಾನ್ಯ ಸದಸ್ಯರು ತಮ್ಮ ತಮ್ಮ ಸ್ಥಾನಗಳಿಗೆ ತೆರಳಿದರು)

3. ಶಾಸನ ರಚನೆ

ವಿಧೇಯಕದ ಮಂಡನೆ

(1) ಕರ್ನಾಟಕ ವಿಧಾನಮಂಡಲ (ಅನರ್ಹತೆಯನ್ನು ತಡೆಗಟ್ಟುವ) (ತಿದ್ದುಪಡಿ) ವಿಧೇಯಕ 2006

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಸವರಾಜ ಎಸ್. ಹೊರಟ್ಟಿ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ, ಕಾನೂನು ನ್ಯಾಯ, ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, " 2006ನೇ ಸಾಲಿನ ಕರ್ನಾಟಕ ವಿಧಾನಮಂಡಲ (ಅನರ್ಹತೆಯನ್ನು ತಡೆಗಟ್ಟುವ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ ".

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2006ನೇ ಸಾಲಿನ ಕರ್ನಾಟಕ ವಿಧಾನಮಂಡಲ (ಅನರ್ಹತೆಯನ್ನು ತಡೆಗಟ್ಟುವ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿಯನ್ನು ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತ ಅನುಮತಿಯನ್ನು ನೀಡಲಾಯಿತು

ಶ್ರೀ ಬಸವರಾಜ ಎಸ್. ಹೊರಟ್ಟಿ (ಪ್ರಾಥಮಿಕ ಹಾಗು ಪ್ರೌಢಶಿಕ್ಷಣ, ಕಾನೂನು ನ್ಯಾಯ, ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೇ, "2006ನೇ ಸಾಲಿನ ಕರ್ನಾಟಕ